# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 214 |
| ಉತ್ತರಿಸಬೇಕಾದ ದಿನಾಂಕ | : | 16-07-2024 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಗೆ ಯಾವ ಯಾವ ಮಾದರಿಯ ಸಾಲಗಳನ್ನು ನೀಡಲಾಗುತ್ತಿದೆ : (ಪೂರ್ಣ ವಿವರ ನೀಡುವುದು) | **ರಾಜ್ಯದಲ್ಲಿ ಸಹಕಾರ ಸಂಘಗಳ ಮೂಲಕ ರೈತರಿಗೆ ಕೆಳಕಂಡ ಮಾದರಿಯ ಸಾಲಗಳನ್ನು ನೀಡಲಾಗುತ್ತಿದೆ.**<br><br>**<u>ಸರ್ಕಾರದ ಯೋಜನೆಗಳು;</u>**<br><br>1) ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದಲ್ಲಿ ಪಶುಸಂಗೋಪನೆ / ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳದ ಸಾಲ ಸೇರಿದಂತೆ ರೂ. 5.00 ಲಕ್ಷಗಳವರೆಗಿನ ಅಲ್ಪಾವಧಿ ಬೆಳೆ ಸಾಲವನ್ನು ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಯೋಜನೆ.<br>2) ರೂ.15.00 ಲಕ್ಷಗಳವರೆಗೆ ಶೇಕಡ 3 ರ ಬಡ್ಡಿ ದರದಲ್ಲಿ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲ ವಿತರಿಸುವ ಯೋಜನೆ.<br>3) ಸಹಕಾರ ಸಂಘಗಳು ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಗೋದಾಮುಗಳಲ್ಲಿ ಶೇಖರಣೆ ಮಾಡಿ ಶೇ.4 ರ ಬಡ್ಡಿ ದರದಲ್ಲಿ ಅಡಮಾನ ಸಾಲ ವಿತರಿಸುವ ಯೋಜನೆ.<br>4) ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ಉಡುಪಿ ಹಾಗೂ ಉತ್ತರ ಕನ್ನಡ ಜಿಲ್ಲೆಗಳ ಗುಡ್ಡಗಾಡು ಪ್ರದೇಶಗಳ ರೈತರ ಕೃಷಿ ಉತ್ಪನ್ನ ಮತ್ತು ಪರಿಕರಗಳ ಸಾಗಾಣಿಕೆಗೆ ನಾಲ್ಕು ಚಕ್ರದ ಪಿಕ್‌ಅಪ್ ವ್ಯಾನ್ ಖರೀದಿಸಲು ಸಹಕಾರ ಸಂಘಗಳು ಶೇ.4 ರ ಬಡ್ಡಿ ದರದಲ್ಲಿ ರೂ.7.00 ಲಕ್ಷ ರೂ.ವರೆಗೆ ಸಾಲ ವಿತರಿಸುವ ಯೋಜನೆ. |

| | | |
|---|---|---|
| | | 5) ರೈತರು ತಮ್ಮ ಹಾಗೂ ತಮ್ಮ ನೆರೆಹೊರೆಯ ರೈತರ ಉತ್ಪನ್ನಗಳನ್ನು ಸಂಗ್ರಹಿಸಲು ಅನುವಾಗುವಂತೆ ಗೋದಾಮು ನಿರ್ಮಿಸಲು ಬ್ಯಾಂಕುಗಳು ನೀಡುವ ರೂ.20.00 ಲಕ್ಷದವರೆಗಿನ ಸಾಲಕ್ಕೆ ಸರ್ಕಾರ ಶೇ.7 ರಷ್ಟು ಬಡ್ಡಿ ಸಹಾಯಧನ ನೀಡುವ ಯೋಜನೆ.<br><br>ಇದಲ್ಲದೇ ಕೃಷಿ ಪತ್ತಿನ ಸಹಕಾರ ಸಂಘಗಳು, ಡಿಸಿಸಿ ಬ್ಯಾಂಕುಗಳು ಮತ್ತು ಪಿಕಾರ್ಡ್ ಬ್ಯಾಂಕುಗಳು ರೈತರಿಗಾಗಿ ಈ ಕೆಳಕಂಡ ಯೋಜನೆಗಳನ್ನು ತಮ್ಮದೇ ಆದ ನಿಯಮಗಳನ್ನು ರೂಪಿಸಿಕೊಂಡು ಸಾಮಾನ್ಯ ಬಡ್ಡಿ ದರದಲ್ಲಿ ವಿತರಿಸುತ್ತಿವೆ.<br><br>1. ಚಿನ್ನಾಭರಣ ಸಾಲ<br>2. ಗೃಹ ನಿರ್ಮಾಣ ಸಾಲ<br>3. ವೈಯಕ್ತಿಕ ಸಾಲ |
| ಆ) | ಮೈಸೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ರೈತರು ಸದರಿ ಸಾಲಗಳನ್ನು ಪಡೆದುಕೊಂಡಿರುತ್ತಾರೆ ಹಾಗೂ ಸುಸ್ತಿದಾರರಾಗಿರುತ್ತಾರೆ : | ಮೈಸೂರು ಜಿಲ್ಲೆಯ ಒಟ್ಟು 99,174 ರೈತರ ರೂ.106705.5835 ಲಕ್ಷ ಸಾಲ ಹೊರಬಾಕಿಯಿದ್ದು ಈ ಪೈಕಿ 7589 ರೈತರ ರೂ.5791.27 ಲಕ್ಷ ಸುಸ್ತಿಯಾಗಿರುತ್ತದೆ. ತಾಲ್ಲೂಕುವಾರು ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಇ) | ಇಂತಹ ಸಾಲ ಸೌಲಭ್ಯಗಳನ್ನು ಪಡೆದು ಸುಸ್ತಿದಾರರಾಗಿರುವ ರಾಜ್ಯದ ಎಲ್ಲಾ ರೈತರ ಸಾಲ ಮನ್ನಾ ಮಾಡಿ ಬಡ ರೈತರಿಗೆ ಅನುಕೂಲ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮವೇನು? | ಸರ್ಕಾರದ ಆದೇಶ ಸಂಖ್ಯೆ: ಸಿಒ 291 ಸಿಎಲ್ಎಸ್ 2023, ದಿನಾಂಕ:20-01-2024 ರ ಪ್ರಕಾರ ರಾಜ್ಯದ ರೈತರು ಸಹಕಾರ ಸಂಸ್ಥೆಗಳ ಮೂಲಕ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳನ್ನು ಪಡೆದು ದಿ:31-12-2023 ಕ್ಕೆ ಸುಸ್ತಿಯಾಗಿರುವ ಸಾಲಗಳ ಅಸಲು ಪಾವತಿಸಿದಲ್ಲಿ ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡಿ ಸರ್ಕಾರವು ಕ್ರಮ ಕೈಗೊಂಡಿರುತ್ತದೆ.<br><br>ಆದೇಶದ ಪ್ರತಿಯನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ. |

**ಸಂಖ್ಯೆ: ಸಿಒ 149 ಸಿಎಲ್ಎಸ್ 2024**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**

ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ. ಎನ್ ಮಂಜೇಗೌಡ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:214 (ಆ) ಕ್ಕೆ ಅನುಬಂಧ (ಮೈಸೂರು ಜಿಲ್ಲೆ)

(ರೂ.ಲಕ್ಷಗಳಲ್ಲಿ)

| ಶಾಖೆಗಳು | ಸಾಲದ ತರಹೆ | ಹೊರಬಾಕಿ | | ಸುಸ್ತಿ | |
|---|---|---|---|---|---|
| | | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಮೈಸೂರು ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 4719 | 5159.91 | 145 | 77.90 |
| | ಮಧ್ಯಮಾವಧಿ ಸಾಲಗಳು | 786 | 812.88 | 107 | 22.75 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 70 | 32.37 | 1 | 0.28 |
| ಟಿ.ನರಸೀಪುರ ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 13683 | 14320.46 | 580 | 326.13 |
| | ಮಧ್ಯಮಾವಧಿ ಸಾಲಗಳು | 648 | 860.62 | 24 | 18.69 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 2746 | 768.60 | 0 | 0.00 |
| ಕೆ.ಆರ್.ನಗರ ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 16330 | 17172.81 | 1151 | 887.58 |
| | ಮಧ್ಯಮಾವಧಿ ಸಾಲಗಳು | 1814 | 2145.43 | 117 | 115.72 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 263 | 73.64 | 0 | 0.00 |
| ನಂಜನಗೂಡು ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 12657 | 13074.42 | 857 | 322.85 |
| | ಮಧ್ಯಮಾವಧಿ ಸಾಲಗಳು | 823 | 1283.66 | 57 | 36.12 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 4077 | 1003.52 | 0 | 0.00 |
| ಹುಣಸೂರು ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 9565 | 12676.70 | 945 | 1227.98 |
| | ಮಧ್ಯಮಾವಧಿ ಸಾಲಗಳು | 1977 | 2579.31 | 551 | 278.60 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 321 | 89.88 | 0 | 0.00 |
| ಪಿರಿಯಾಪಟ್ಟಣ ತಾಲ್ಲೂಕು | ಕೆಸಿಸಿ ಸಾಲಗಳು(ಬೆಳೆ ಸಾಲಗಳು) | 12161 | 15073.21 | 1140 | 900.16 |
| | ಮಧ್ಯಮಾವಧಿ ಸಾಲಗಳು | 3300 | 3875.62 | 647 | 307.66 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 0 | 0.00 | 0 | 0.00 |
| ಹೆಚ್ ಡಿ ಕೋಟೆ ತಾಲ್ಲೂಕು | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 5930 | 10671.43 | 527 | 806.17 |
| | ಮಧ್ಯಮಾವಧಿ ಸಾಲಗಳು | 1061 | 654.93 | 308 | 117.64 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 768 | 153.76 | 21 | 5.92 |
| ಸರಗೂರು ತಾಲ್ಲೂಕು | ಕೆಸಿಸಿ ಸಾಲಗಳು(ಬೆಳೆ ಸಾಲಗಳು) | 4638 | 3826.07 | 206 | 248.24 |
| | ಮಧ್ಯಮಾವಧಿ ಸಾಲಗಳು | 708 | 360.23 | 204 | 68.99 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 129 | 36.12 | 1 | 0.28 |

| | | 30.06.2024ರ ಅಂತ್ಯಕ್ಕೆ | | | |
|---|---|---|---|---|---|
| | | ಹೊರಬಾಕಿ | | ಸುಸ್ತಿ | |
| | | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಮೈಸೂರು ಜಿಲ್ಲೆಯ ಒಟ್ಟು ಜುಮ್ಲಾ | ಕೆಸಿಸಿ ಸಾಲಗಳು (ಬೆಳೆ ಸಾಲಗಳು) | 79683 | 91975.01254 | 5551 | 4797.01 |
| | ಮಧ್ಯಮಾವಧಿ ಸಾಲಗಳು | 11117 | 12572.68 | 2015 | 987.78 |
| | ಪಶು ಸಂಗೋಪನೆ ದುಡಿಯುವ ಬಂಡವಾಳ ಸಾಲ | 8374 | 2157.89 | 23 | 6.48 |
| | ಒಟ್ಟು | 99174 | 106705.5835 | 7589 | 5791.27 |

ಸಹಕಾರ ಸಂಘಗಳ ಅಪರ ನಿಬಂಧಕರು
(ಪತ್ತು)
ಸಹಕಾರ ಸಂಘಗಳ ನಿಬಂಧಕರ ಕಛೇರಿ
ನಂ. 1, ಅಲಿ ಆಸ್ಕರ್ ರಸ್ತೆ, ಬೆಂಗಳೂರು-

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಸಹಕಾರ ಸಂಸ್ಥೆಗಳ ಮೂಲಕ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಅಸಲು ಪಾವತಿಸಿದಲ್ಲಿ ಅದರ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ ಕಂಇ 449 ಟಿಎನ್‌ಆರ್ 2023 ದಿನಾಂಕ: 13-09-2023, ದಿನಾಂಕ: 12-10-2023 ಹಾಗೂ ದಿನಾಂಕ: 04-11-2023
2. ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಸಿಆರ್‌ಡಿ/ಸಿಎಬಿ-1/ / 2023-24 , ದಿನಾಂಕ:29.12.2023 ಮತ್ತು 10-01-2024.

****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ. (1) ರ ಸರ್ಕಾರದ ಆದೇಶದಲ್ಲಿ, ರಾಜ್ಯದ 223 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ.

ರಾಜ್ಯದಲ್ಲಿ ಉದ್ಭವಿಸಿರುವ ಅನಾವೃಷ್ಟಿಗಳ ಹಿನ್ನಲೆಯಲ್ಲಿ ರಾಜ್ಯದ ರೈತರು ಸಹಕಾರ ಸಂಸ್ಥೆಗಳಿಂದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲ ಪಡೆದು ಸಾಲ ಮರುಪಾವತಿಸಲು ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿರುವುದನ್ನು ಮತ್ತು ಇದರಿಂದ ಸಹಕಾರ ಸಂಸ್ಥೆಗಳು ನಬಾರ್ಡ್‌ನಿಂದ ಪಡೆದ ಸಾಲವನ್ನು ಮರುಪಾವತಿಸಲು ಸಾಧ್ಯವಾಗದೇ ಪುನಃ ರೈತರಿಗೆ ಸಾಲ ನೀಡಲು ತೊಂದರೆಯಾಗುತ್ತಿರುವುದನ್ನು ಮನಗಂಡು ಇಂತಹ ಸುಸ್ತಿದಾರರಾದ ರೈತರನ್ನು ಋಣಮುಕ್ತರನ್ನಾಗಿ ಮಾಡಿ ಮುಂದಿನ ತಮ್ಮ ಕೃಷಿ ಚಟುವಟಿಕೆಗಳಿಗೆ ಸಾಲ ಪಡೆದು ಅರ್ಹತೆ ಗಳಿಸಲು ಸರ್ಕಾರವು ಯೋಜನೆ ರೂಪಿಸುವುದು ಅತ್ಯವಶ್ಯಕವಾಗಿರುತ್ತದೆ.

ಮೇಲೆ ಓದಲಾದ (2) ರ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ ಸಹಕಾರ ಸಂಸ್ಥೆಗಳ ಮೂಲಕ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲಗಳನ್ನು ಪಡೆದು ದಿನಾಂಕ:31.12.2023ರ ಅಂತ್ಯಕ್ಕೆ ಸಹಕಾರ ಸಂಸ್ಥೆಗಳಿಗೆ 56,879 ರೈತರಿಂದ ರೂ. 58,515.96 ಲಕ್ಷಗಳ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲಗಳು ಸುಸ್ತಿಯಾಗಿದ್ದು, ಇದರ ಮೇಲಿನ ಬಡ್ಡಿ ಬಾಬ್ತು ರೂ. 44,020.50 ಲಕ್ಷಗಳಾಗಿರುತ್ತವೆ ಎಂದು ತಿಳಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸಹಕಾರ ಸಂಸ್ಥೆಗಳ ಮೂಲಕ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಮೇಲಿನ ಅಸಲನ್ನು ಪಾವತಿಸದ ರೈತರಿಗೆ ಬಡ್ಡಿಯನ್ನು ಮನ್ನಾ ಮಾಡಲು ಸರ್ಕಾರವು ತೀರ್ಮಾನಿಸಿ ಅದರಂತೆ ಕೆಳಕಂಡ ಆದೇಶ ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಸಿಒ 291 ಸಿಎಲ್ಎಸ್ 2023, ಬೆಂಗಳೂರು, ದಿನಾಂಕ: 20.01.2024</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರೈತರು ರಾಜ್ಯದ ಸಹಕಾರ ಸಂಘಗಳು ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಂದ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ, ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಕಂತುಗಳ ಅಸಲನ್ನು ದಿನಾಂಕ:29.02.2024 ರೊಳಗೆ ಸಂಬಂಧಪಟ್ಟ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಪೂರ್ತಿಯಾಗಿ ಮರುಪಾವತಿಸಿದಲ್ಲಿ ಈ ಮೊತ್ತಕ್ಕೆ ಬಾಕಿ ಇರುವ ಬಡ್ಡಿಯನ್ನು ಮನ್ನಾ ಮಾಡಲು ಮತ್ತು ಈ ರೀತಿ ಮನ್ನಾ ಮಾಡಿದ ಬಡ್ಡಿ ಮೊಬಲಗನ್ನು ಸಹಕಾರ ಸಂಘಗಳಿಗೆ ಸರ್ಕಾರವು ಭರ್ತಿ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರಾತಿ ನೀಡಲಾಗಿದೆ.

**ಷರತ್ತುಗಳು :**

1. ಈ ಸೌಲಭ್ಯವು ರೈತರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್ ಸಹಕಾರ ಸಂಘಗಳು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಂದ ಸಾಲ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ.

2. ಈ ಯೋಜನೆ ಕೃಷಿಯೇತರ ಸಾಲಗಳಿಗೆ ಅನ್ವಯವಾಗುವುದಿಲ್ಲ ಮತ್ತು ಮೇಲೆ ತಿಳಿಸಿರುವ ಸಂಸ್ಥೆಗಳನ್ನು ಹೊರತುಪಡಿಸಿ ಇತರೆ ಸಹಕಾರ ಸಂಸ್ಥೆಗಳಲ್ಲಿ ಪಡೆದ ಸಾಲಗಳಿಗೆ ಅನ್ವಯಿಸುವುದಿಲ್ಲ. ನಬಾರ್ಡ್ ಗುರುತಿಸಿದ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳಿಗೆ ಅಂದರೆ ಲಘು ನೀರಾವರಿ, ಭೂ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ ಉದ್ದೇಶಗಳಿಗೆ ಮಾತ್ರ ಈ ಯೋಜನೆ ಅನ್ವಯವಾಗುತ್ತದೆ. ಮುಂದುವರೆದು, ರಾಜ್ಯ ಸರ್ಕಾರದ ಬಡ್ಡಿ ರಿಯಾಯತಿ ಬದ್ಧತೆಯಡಿ ವಿತರಿಸಿರುವ ಕೃಷಿ / ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ.

3. ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಂದ ಪಡೆದು ದಿನಾಂಕ:31.12.2023 ಕ್ಕೆ ಸುಸ್ತಿಯಾಗಿರುವ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಅಸಲನ್ನು ದಿನಾಂಕ:29.02.2024 ರೊಳಗೆ ಸಂಬಂಧಪಟ್ಟ ಸಂಸ್ಥೆಗಳಿಗೆ ಸಾಲ ಪಡೆದ ರೈತರು ಮರುಪಾವತಿ ಮಾಡಿದಲ್ಲಿ ಸದರಿ ಸಾಲಗಳ ಮೇಲಿನ ಮರುಪಾವತಿ ದಿನಾಂಕದವರೆಗಿನ ಬಡ್ಡಿಯನ್ನು ಮನ್ನಾ ಮಾಡಿ ಸಂಬಂಧಪಟ್ಟ ಸಹಕಾರಿ ಸಂಸ್ಥೆಗಳಿಗೆ ಸರ್ಕಾರ ಭರಣ ಮಾಡುವುದು. ಈ ಯೋಜನೆಯು ಮಾರಿಟೋರಿಯಂ ಅವಧಿಯಲ್ಲಿ ಸುಸ್ತಿಯಾಗಿರುವ ಬಡ್ಡಿಗೂ ಸಹ ಅನ್ವಯವಾಗುತ್ತದೆ.

4. ಈ ಯೋಜನೆಯಡಿಯಲ್ಲಿ ಪ್ರಾಥಮಿಕ ಸಹಕಾರ ಸಂಘಗಳು, ಲ್ಯಾಂಪ್ಸ್ ಸಹಕಾರ ಸಂಘಗಳು, ಡಿಸಿಸಿ ಬ್ಯಾಂಕುಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕು (ಪಿಕಾರ್ಡ್) ಗಳಿಗೆ ರೈತರು ಮರುಪಾವತಿಸುವ ಸುಸ್ತಿ ಸಾಲದ ಅಸಲು ದಿನಾಂಕ:01.04.2004 ಕ್ಕಿಂತ ಹಿಂದಿನ ಅವಧಿಯ ಸಾಲವಾಗಿದ್ದರೆ, ಬಡ್ಡಿ ಪಾವತಿಸಲು ಬಾಕಿ ಇದ್ದ ದಿನಾಂಕದಿಂದ ಸಾಲ ಮರುಪಾವತಿ ದಿನಾಂಕದವರೆಗೆ ಸಾಲಗಳಿಗೆ ನಿಗದಿಮಾಡಲಾಗಿರುವ ಬಡ್ಡಿ ದರ ಅಥವಾ ಶೇ.12 ರ ಬಡ್ಡಿದರ ಇದರಲ್ಲಿ ಯಾವುದು ಕಡಿಮೆಯೋ ಅಂತಹ ಬಡ್ಡಿ ಆಧಾರದಲ್ಲಿ ಸಹಕಾರ ಸಂಘಗಳಿಗೆ ಸರ್ಕಾರದ ವತಿಯಿಂದ ಬಡ್ಡಿ ಸಹಾಯಧನವನ್ನು ಭರಿಸಲಾಗುವುದು.

5. ದಿನಾಂಕ:01.04.2004ರ ನಂತರದಲ್ಲಿನ ಸಾಲಗಳಿಗೆ ಆಯಾ ವರ್ಷದಲ್ಲಿ ರೈತರು ಪಾವತಿಸಬೇಕಾದ ಬಡ್ಡಿ ಮತ್ತು ಸರ್ಕಾರ ಪಾವತಿಸಬೇಕಾದ ಬಡ್ಡಿ ಸಹಾಯಧನದ ಒಟ್ಟು ಬಡ್ಡಿ ಅಥವಾ ಗರಿಷ್ಠ ಶೇ.12 ಇದರಲ್ಲಿ ಯಾವುದು ಕಡಿಮೆಯೋ ಆ ಬಡ್ಡಿಯನ್ನು ಸಂಬಂಧಿಸಿದ ಸಹಕಾರ ಸಂಸ್ಥೆಗಳಿಗೆ ಸರ್ಕಾರದಿಂದ ಭರಿಸಲಾಗುವುದು. ರೂ.10.00 ಲಕ್ಷಕ್ಕಿಂತ ಹೆಚ್ಚಿನ ಸಾಲವನ್ನು ಸಾಮಾನ್ಯ ಬಡ್ಡಿ ದರದಲ್ಲಿ ವಿತರಿಸಿದ್ದರೂ ಸಹ ಆಯಾ ವರ್ಷದಲ್ಲಿ ರೂ.10.00 ಲಕ್ಷಗಳವರೆಗೆ ನಿಗದಿಪಡಿಸಿದ ಬಡ್ಡಿ ದರದನ್ವಯ ಬಡ್ಡಿ ಮನ್ನಾ ಮೊತ್ತ ಕ್ಲೇಮು ಮಾಡತಕ್ಕದ್ದು.

6. ಈ ಯೋಜನೆಯಲ್ಲಿ ಮರುಪಾವತಿಸುವ ಸಾಲಗಳಿಗೆ ಯಾವುದೇ ಸುಸ್ತಿ ಬಡ್ಡಿ, ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬಡ್ಡಿ, ವಸೂಲಿ ವೆಚ್ಚ (Recovery Charges) ಹಾಗೂ ಇತರೆ ವೆಚ್ಚಗಳನ್ನು ಸಹಕಾರ ಸಂಸ್ಥೆಗಳು ಕ್ಲೇಮು ಮಾಡತಕ್ಕದ್ದಲ್ಲ.

7. ಈ ಯೋಜನೆಯಲ್ಲಿ ತಗಲುವ ವೆಚ್ಚವನ್ನು ಸಹಕಾರ ಇಲಾಖೆಗೆ ಒದಗಿಸಿರುವ ಆಯವ್ಯಯದ ಸಾಮಾನ್ಯ, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯ ಲೆಕ್ಕಶೀರ್ಷಿಕೆಯಲ್ಲಿ ಭರಿಸತಕ್ಕದ್ದು.

8. ಈ ಯೋಜನೆಯಡಿ ಕ್ಲೇಮ್ ಬಿಲ್ಲುಗಳನ್ನು ಸಹಕಾರ ಸಂಘಗಳು ವಸೂಲಾತಿ ಅಂತಿಮ ದಿನಾಂಕದಿಂದ 45 ದಿನಗಳೊಳಗಾಗಿ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸತಕ್ಕದ್ದು, ರೈತರು ಸುಸ್ತಿ ಅಸಲು ಮೊತ್ತವನ್ನು ಮರುಪಾವತಿಸುವ ದಿನಾಂಕದವರೆಗೆ ಮಾತ್ರ ಬಡ್ಡಿ ಕ್ಲೇಮುಗಳಿಗೆ ಅವಕಾಶವಿರುತ್ತದೆ. ಯಾವುದೇ ಕಾರಣದಿಂದಾಗಿ ಕ್ಲೇಮು ಮೊತ್ತ ಬಿಡುಗಡೆಗೆ ಆಗುವ ವಿಳಂಬದ ಅವಧಿಗೆ ಯಾವುದೇ ಕ್ಲೇಮುಗಳಿಗೆ ಅವಕಾಶವಿರುವುದಿಲ್ಲ.

9. ಪ್ಯಾಕ್ಸ್/ಲ್ಯಾಂಪ್ಸ್ ಸಹಕಾರ ಸಂಘಗಳು ಹಾಗೂ ಡಿಸಿಸಿ ಬ್ಯಾಂಕುಗಳ ಬಿಲ್ಲುಗಳನ್ನು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ತಯಾರಿಸಿ ಸಹಕಾರ ಸಂಘಗಳ ಲೆಕ್ಕಪರಿಶೋಧನ ಜಂಟಿ / ಉಪ ನಿರ್ದೇಶಕರು ಮತ್ತು ಸಹಕಾರ ಸಂಘಗಳ ಉಪನಿಬಂಧಕರು ಇವರುಗಳ ಜಂಟಿ ದೃಢೀಕರಣದೊಂದಿಗೆ ಬಿಲ್ಲುಗಳನ್ನು ಬಿಡುಗಡೆಗೆ ವ್ಯವಸ್ಥಾಪಕ ನಿರ್ದೇಶಕರು, ಅಪೆಕ್ಸ್ ಬ್ಯಾಂಕ್ ಇವರ ಮೂಲಕ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸತಕ್ಕದ್ದು.

10. ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕು (ಪಿಕಾರ್ಡ್)ಗಳ ಬಿಲ್ಲುಗಳನ್ನು ಜಿಲ್ಲಾ ವ್ಯವಸ್ಥಾಪಕರು ತಯಾರಿಸಿ ಸಹಕಾರ ಸಂಘಗಳ ಲೆಕ್ಕಪರಿಶೋಧನ ಜಂಟಿ / ಉಪ ನಿರ್ದೇಶಕರು ಮತ್ತು ಸಹಕಾರ ಸಂಘಗಳ ಉಪನಿಬಂಧಕರು ಇವರುಗಳ ಜಂಟಿ ದೃಢೀಕರಣದೊಂದಿಗೆ ಕಸ್ಕಾರ್ಡ್

ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕರು ಇವರ ಮೂಲಕ ಸಹಕಾರ ಸಂಘಗಳ ನಿಬಂಧಕರಿಗೆ ಸಲ್ಲಿಸತಕ್ಕದ್ದು.

11. ಸಹಕಾರ ಸಂಘಗಳ ನಿಬಂಧಕರು ಅರ್ಹ ಕ್ಲೇಮ್‌ಗಳನ್ನು ಪರಿಶೀಲಿಸಿ, ನಿಗದಿತವಾಗಿ ಹಣ ಬಿಡುಗಡೆಗೆ ಕ್ರಮವಿಡತಕ್ಕದ್ದು ಮತ್ತು ಕಾಲಕಾಲಕ್ಕೆ ಸರ್ಕಾರಕ್ಕೆ ಬಳಕೆ ಪ್ರಮಾಣ ಪತ್ರವನ್ನು ಒದಗಿಸತಕ್ಕದ್ದು.

12. ಸಹಕಾರ ಸಂಘಗಳ ನಿಬಂಧಕರು ಈ ಯೋಜನೆ ಅನುಷ್ಠಾನಕ್ಕಾಗಿ ಅಗತ್ಯವಿರುವ ಪ್ರಪತ್ರಗಳನ್ನು ಒದಗಿಸಲು ಮತ್ತು ಕಾಲಕಾಲಕ್ಕೆ ಸಂಬಂಧಿಸಿದವರಿಗೆ ಅಗತ್ಯ ಸಲಹೆ/ಸೂಚನೆ/ನಿರ್ದೇಶನಗಳನ್ನು ನೀಡತಕ್ಕದ್ದು.

13. ಈ ಯೋಜನೆಯು ಜಾರಿ ಇರುವ ಬಗ್ಗೆ ಎಲ್ಲಾ ಸಾಲಗಾರ ಸದಸ್ಯರಿಗೆ ಪತ್ರದ ಮುಖೇನ ಸಾಲದ ಸೌಲಭ್ಯ ಮತ್ತು ಇದರಿಂದ ರೈತ ಸದಸ್ಯರಿಗೆ ದೊರೆಯುವ ರಿಯಾಯಿತಿ ವಿವರಗಳನ್ನು ಸಂಘದ ಮೂಲಕ ತಿಳಿಸುವ ವ್ಯವಸ್ಥೆಯನ್ನು ನಿಬಂಧಕರು ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: FD 10 Exp-2/2024, ದಿನಾಂಕ: 20-01-2024ರ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

20/1/2024

(ಎ.ಸಿ. ದಿವಾಕರ್)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ

<u>ಇವರಿಗೆ:</u>

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

<u>ಪ್ರತಿಗಳು:</u>

1. ಮಹಾಲೇಖಪಾಲರು, ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಮುಖ್ಯಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
4. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.

8. ಸಹಕಾರ ಲೆಕ್ಕಪರಿಶೋಧನಾ ನಿರ್ದೇಶಕರು, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು-4.
9. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್ ನಿ., ನೃಪತ್ತುಂಗ, ನಂ.1, ಪಂಪಾಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-18.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿ., ಚಾಮರಾಜಪೇಟೆ, ಬೆಂಗಳೂರು-18.
11. ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
12. ರಾಜ್ಯ ಖಜಾನೆ ಅಧಿಕಾರಿ, ಜೆ.ಸಿ. ರಸ್ತೆ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ, ಬೆಂಗಳೂರು.
15. ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ ಇವರ ಆಪ್ತ ಸಹಾಯಕರು, ಸಹಕಾರ ಇಲಾಖೆ, ಬೆಂಗಳೂರು
16. ಸರ್ಕಾರದ ಅಧೀನ ಕಾರ್ಯದರ್ಶಿ-3, ಸಹಕಾರ ಇಲಾಖೆ, ಬೆಂಗಳೂರು.
17. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿ

*****

ಕರ್ನಾಟಕ ಸರ್ಕಾರ

(ಸಹಕಾರ ಇಲಾಖೆ)

**ಸಹಕಾರ ಸಂಘಗಳ ನಿಬಂಧಕರ ಕಛೇರಿ, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.**

ಸಂಖ್ಯೆ:ಸಿಆರ್‌ಡಿ/ಸಿಎಬಿ-1/ 62 /2023-24 ದಿನಾಂಕ: 20-01-2024

**'ಸುತ್ತೋಲೆ'**

**ವಿಷಯ:-** ರಾಜ್ಯದ ರೈತರು ಸಹಕಾರ ಸಂಸ್ಥೆಗಳ ಮೂಲಕ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳನ್ನು ಪಡೆದು ದಿ.31-12-2023 ಕ್ಕೆ ಸುಸ್ತಿಯಾಗಿರುವ ಸಾಲಗಳ ಮೇಲಿನ ಬಡ್ಡಿಯನ್ನು ಮನ್ನಾ ಮಾಡುವ ಬಗ್ಗೆ

**ಉಲ್ಲೇಖ:-** 1. ಸರ್ಕಾರದ ಆದೇಶ ಸಂಖ್ಯೆ ಸಿಒ 291 ಸಿಎಲ್ಎಸ್ 2023, ಬೆಂಗಳೂರು, ದಿ.20.01.2024

=====

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರ ಉಲ್ಲೇಖ (1) ರಲ್ಲಿ ರೈತರು ರಾಜ್ಯದ ಸಹಕಾರ ಸಂಘಗಳು ಅಂದರೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ಲ್ಯಾಂಪ್ಸ್, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳು ಮತ್ತು ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳಿಂದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲ ಪಡೆದು ದಿ.31-12-2023 ಕ್ಕೆ ಸುಸ್ತಿಯಾಗಿರುವ ಕಂತುಗಳ ಅಸಲನ್ನು ದಿ.29-2-2024 ರೊಳಗೆ ಸಂಬಂಧಪಟ್ಟ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಪೂರ್ತಿಯಾಗಿ ಮರುಪಾವತಿಸಿದಲ್ಲಿ ಬಾಕಿ ಇರುವ ಮರುಪಾವತಿ ದಿನಾಂಕದವರೆಗಿನ ಬಡ್ಡಿಯನ್ನು ಮನ್ನಾ ಮಾಡಲು ಮತ್ತು ಈ ರೀತಿ ಮನ್ನಾ ಮಾಡಿದ ಮೊಬಲಗನ್ನು ಸಹಕಾರ ಸಂಘಗಳಿಗೆ ಭರ್ತಿ ಮಾಡಲು ಉಲ್ಲೇಖದಲ್ಲಿ ಸರ್ಕಾರ ಆದೇಶ ಹೊರಡಿಸಲಾಗಿದೆ.

ಸದರಿ ಆದೇಶದ ಪ್ರತಿಯನ್ನು ಈ ಪತ್ರಕ್ಕೆ ಲಗತ್ತಿಸಲಾಗಿದ್ದು, ಈ ಯೋಜನೆ ಒಂದು ಬಾರಿ ಯೋಜನೆಯಾಗಿದ್ದು, ರೈತರಿಗೆ ಈ ಯೋಜನೆ ತಲುಪಿಸಲು ಮತ್ತು ಸರ್ಕಾರದ ಆದೇಶದ ಎಲ್ಲಾ ಷರತ್ತುಗಳನ್ನು ಸಹಕಾರ ಸಂಸ್ಥೆಗಳು ಯತಾವತ್ತಾಗಿ ಪಾಲಿಸುವಂತೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

ದಿ.31-12-2023 ಕ್ಕೆ ಕೃಷಿ ಸಾಲ ಸುಸ್ತಿಯಾದ ರೈತರಿಗೆ ನೀಡಬೇಕಾದ ತಿಳುವಳಿಕೆ ಪತ್ರದ ನಮೂನೆಯನ್ನು ಈ ಪತ್ರಕ್ಕೆ ಲಗತ್ತಿಸಲಾಗಿದ್ದು, ಎಲ್ಲಾ ಅರ್ಹ ರೈತರಿಗೆ 5 ದಿನದೊಳಗಾಗಿ ಪತ್ರವನ್ನು ತಲುಪಿಸಿ ಸ್ವೀಕೃತಿಯನ್ನು ಪಡೆಯಲು ಸೂಚಿಸಲಾಗಿದೆ.

ಸಹಕಾರ ಸಂಸ್ಥೆಗಳು ಸರ್ಕಾರದ ಆದೇಶದನ್ವಯ ವಸೂಲಾತಿಗೆ ನಿಗದಿಪಡಿಸಿದ ದಿನಾಂಕದ 45 ದಿನದೊಳಗಾಗಿ ಬಿಲ್ಲು ಸಲ್ಲಿಸಬೇಕಿದ್ದು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ/ಲ್ಯಾಂಪ್ಸ್/ಪಿಕಾರ್ಡ್ ಬ್ಯಾಂಕ್/ಡಿಸಿಸಿ ಬ್ಯಾಂಕ್ ಶಾಖೆ ಸಲ್ಲಿಸಬೇಕಾದ ಬಿಲ್ಲುಗಳ ನಮೂನೆಯನ್ನು ಅನುಬಂಧ-1 ರಲ್ಲಿ ಮತ್ತು ಡಿಸಿಸಿ ಬ್ಯಾಂಕ್/ಕಸ್ಕಾರ್ಡ್ ಬ್ಯಾಂಕ್ ಕ್ರೂಢೀಕೃತ ಬಿಲ್ಲು ಸಲ್ಲಿಸಬೇಕಾದ ನಮೂನೆಯನ್ನು ಅನುಬಂಧ-2 ರಲ್ಲಿ ನೀಡಲಾಗಿದ್ದು, ದಿ.29-02-2024 ಮುಗಿದ 45 ದಿನದೊಳಗಾಗಿ ಬಿಲ್ಲುಗಳನ್ನು ಈ ಕಛೇರಿಗೆ ತಪ್ಪದೇ ಸಲ್ಲಿಸಲು ಸೂಚಿಸಲಾಗಿದೆ.

ದಿ.31-12-2023 ಕ್ಕೆ ಇದ್ದ ಸುಸ್ತಿ ಸಾಲಗಳಿಗೆ ಸಂಬಂಧಿಸಿದಂತೆ ಈ ದಿನಾಂಕದ ಪೂರ್ವದಲ್ಲಿನ ಗಡುವು ದಿನಾಂಕದವರೆಗೆ ಮಾತ್ರ ಹೊರಬಾಕಿ ಮೇಲೆ ಮತ್ತು ಗಡುವು ದಿನಾಂಕದಿಂದ ಸಾಲ ಮರುಪಾವತಿ ದಿನಾಂಕದವರೆಗೆ ಸುಸ್ತಿ ಕಂತಿನ ಮೊತ್ತಕ್ಕೆ ಮಾತ್ರ ಬಡ್ಡಿಯನ್ನು ಲೆಕ್ಕಾಚಾರ ಮಾಡಲು ಸೂಚಿಸಲಾಗಿದೆ. ಅದೇ ರೀತಿ ಮಾರಟೋರಿಯಮ್ ಅವಧಿಗೂ ಸಹ ದಿ.31-12-2023 ರ ಪೂರ್ವದಲ್ಲಿನ ಗಡುವು ದಿನಾಂಕದವರೆಗೆ ಮಾತ್ರ ಬಡ್ಡಿ ಲೆಕ್ಕಾ ಚಾರ ಮಾಡಲು ಸೂಚಿಸಲಾಗಿದೆ.

ರೈತರು ಪ್ಯಾಕ್ಸ್ ಮತ್ತು ಪಿಕಾರ್ಡ್ ಬ್ಯಾಂಕುಗಳಿಗೆ ಮರುಪಾವತಿಸಿದ ಅಸಲನ್ನು ರಜಾ ದಿನ ಹೊರತು ಪಡಿಸಿ ಎರಡು ದಿನದೊಳಗಾಗಿ ಸಂಬಂಧಪಟ್ಟ ಡಿಸಿಸಿ ಬ್ಯಾಂಕು ಮತ್ತು ಕಸ್ಕಾರ್ಡ್ ಬ್ಯಾಂಕುಗಳಿಗೆ ಪಾಸ್ ಆನ್ ಮಾಡತಕ್ಕದ್ದು, ಸ್ವಂತ ಬಂಡವಾಳದಿಂದ ವಿತರಿಸಿದ ಸಾಲಗಳಿಗೂ ಸಂಬಂಧಿಸಿದ ಸಂಘಗಳು ಡಿಸಿಸಿ ಬ್ಯಾಂಕ್/ಕಸ್ಕಾರ್ಡ್ ಬ್ಯಾಂಕಿನಲ್ಲಿ ಹೊಂದಿರುವ ಚಾಲ್ತಿ ಖಾತೆ ಅಥವಾ ಉಳಿತಾಯ ಖಾತೆಗೆ ಪಾಸ್ ಆನ್ ಮಾಡತಕ್ಕದ್ದು.

ಜಿಲ್ಲೆಯ ಎಲ್ಲಾ ಪ್ಯಾಕ್ಸ್ ಮತ್ತು ಲ್ಯಾಂಪ್ಸ್ ಬಿಲ್ಲುಗಳನ್ನು (ವಾಣಿಜ್ಯ ಬ್ಯಾಂಕುಗಳಿಗೆ ಅಧ್ಯರ್ಪಿತಗೊಂಡ ಸಹಕಾರ ಸಂಘಗಳನ್ನು ಒಳಗೊಂಡಂತೆ) ಕ್ರೋಢೀಕರಿಸಲು ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳನ್ನು ನೋಡಲ್ ಏಜೆನ್ಸಿಯಾಗಿ ನೇಮಕ ಮಾಡಲಾಗಿದೆ. ಸಹಕಾರ ಸಂಘಗಳಿಂದ ನಿಗದಿತ ಅವಧಿಯಲ್ಲಿ ಬಿಲ್ಲುಗಳನ್ನು ಪಡೆದು ಕ್ರೋಢೀಕರಿಸಿ ನಿಬಂಧಕರಿಗೆ ಸಲ್ಲಿಸುವ ಸಂಪೂರ್ಣ ಹೊಣೆಗಾರಿಕೆ ಡಿಸಿಸಿ ಬ್ಯಾಂಕುಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹೊಂದಿರತಕ್ಕದ್ದು. ಸದರಿ ಅಧಿಕಾರಿಯವರು ಗಡುವು ಮುಗಿದ 20 ದಿನದೊಳಗಾಗಿ ಬಿಲ್ಲು ತಯಾರಿಸಿ, ಜಂಟಿಯಾಗಿ ದೃಢೀಕರಿಸಲು ಸಂಬಂಧಿಸಿದ ಉಪನಿಬಂಧಕರೊಂದಿಗೆ ಮತ್ತು ಲೆಕ್ಕ ಪರಿಶೋಧನಾ ಉಪ ನಿರ್ದೇಶಕರೊಂದಿಗೆ ಸಮಾಲೋಚಿಸಿ ದಿನಾಂಕ ಮತ್ತು ಸ್ಥಳವನ್ನು ನಿಗದಿಪಡಿಸಬೇಕು. (ವಾರದ ಮಧ್ಯದ ದಿನಗಳಲ್ಲಿ) ಸದರಿ ದಿನಾಂಕದಂದು ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಜಂಟಿಯಾಗಿ ಬಿಲ್ಲುಗಳನ್ನು ದಿ.15-04-2024 ರೊಳಗೆ ದೃಢೀಕರಿಸತಕ್ಕದ್ದು. ಪಿಕಾರ್ಡ್ ಬ್ಯಾಂಕ್ ಗಳ ಬಿಲ್ಲುಗಳನ್ನು ಕಸ್ಕಾರ್ಡ್ ಬ್ಯಾಂಕ್ ನ ವ್ಯವಸ್ಥಾಪಕರು ಮತ್ತು ವ್ಯವಸ್ಥಾಪಕ ನಿರ್ದೇಶಕರು ನಿರ್ವಹಿಸತಕ್ಕದ್ದು ಮತ್ತು ಇದೇ ಪದ್ಧತಿಯು ಪಿಕಾರ್ಡ್ ಬ್ಯಾಂಕ್ ಮತ್ತು ಕಸ್ಕಾರ್ಡ್ ಬ್ಯಾಂಕಿಗೆ ಅನ್ವಯವಾಗುತ್ತದೆ. ಸರ್ಕಾರ ಒದಗಿಸುವ ಅನುದಾನದ ಮಿತಿಯಲ್ಲಿ ಮೊದಲು ಬಂದ ಬಿಲ್ಲುಗಳಿಗೆ ಅನುದಾನ ಬಿಡುಗಡೆ ಮಾಡಲಾಗುವುದು. ಯಾವುದೇ ಕಾರಣಕ್ಕಾಗಿ ಬಿಲ್ಲುಗಳನ್ನು ತಡವಾಗಿ ಸಲ್ಲಿಸಿದಲ್ಲಿ ಅಂತಹ ಬಿಲ್ಲುಗಳನ್ನು ಪರಿಗಣಿಸಲಾಗುವುದಿಲ್ಲ ಹಾಗೂ ಇದಕ್ಕಾಗಿ ಸಂಬಂಧಿಸಿದ ಅಧಿಕಾರಿಗಳನ್ನು ಜವಾಬ್ದಾರರನ್ನಾಗಿ ಮಾಡಲಾಗುವುದು.

ಸರ್ಕಾರದ ಆದೇಶದ ಎಲ್ಲಾ ಷರತ್ತುಗಳನ್ನು ಮತ್ತು ಮೇಲಿನ ಸೂಚನೆಗಳನ್ನು ಸಹಕಾರ ಸಂಸ್ಥೆಗಳು ಯತಾವತ್ತಾಗಿ ಪಾಲಿಸುವಂತೆ ಎಲ್ಲಾ ಅವಶ್ಯಕ ಕ್ರಮಗಳನ್ನು ಕೈಗೊಂಡು ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು ಸೂಚಿಸಲಾಗಿದೆ.

(ಕ್ಯಾಪ್ಟನ್ ಡಾ॥ ಕೆ. ರಾಜೇಂದ್ರ, ಐ.ಎ.ಎಸ್)
ಸಹಕಾರ ಸಂಘಗಳ ನಿಬಂಧಕರು
ಕರ್ನಾಟಕ ರಾಜ್ಯ, ಬೆಂಗಳೂರು

ಗೆ,

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ನಿ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ, ಬೆಂಗಳೂರು
3. ಎಲ್ಲಾ ಸಹಕಾರ ಸಂಘಗಳ ಜಂಟಿ ನಿಬಂಧಕರು
4. ಎಲ್ಲಾ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳ ವ್ಯವಸ್ಥಾಪಕ ನಿರ್ದೇಶಕರು
5. ಎಲ್ಲಾ ಸಹಕಾರ ಸಂಘಗಳ ಉಪ ನಿಬಂಧಕರು
6. ಎಲ್ಲಾ ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಉಪ ನಿರ್ದೇಶಕರುಗಳು

ಪ್ರತಿಯನ್ನು,

ಲೆಕ್ಕ ಪರಿಶೋಧನಾ ನಿರ್ದೇಶಕರು, ಲೆಕ್ಕಾ ಪರಿಶೋಧನಾ ಇಲಾಖೆ ರವರಿಗೆ ನೀಡಿ ಬಿಲ್ಲುಗಳನ್ನು ನಿಗದಿತ ಅವಧಿಯಲ್ಲಿ ದೃಢೀಕರಿಸುವಂತೆ ಸಂಬಂಧಪಟ್ಟ ಲೆಕ್ಕ ಪರಿಶೋಧನಾ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲು ಕೋರಲಾಗಿದೆ.